# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 35 (242) |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಎಸ್. ಅರುಣ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 06/07/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ಕಾರ್ಮಿಕ ಮಂಡಳಿಯಲ್ಲಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು). | ಕರ್ನಾಟಕ ಕಟ್ಟಡ ಮತ್ತು ಇತರೆ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಪ್ರಾರಂಭದಿಂದ ಏಪ್ರಿಲ್, 2023 ರವರೆಗೆ 44.28 ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ.<br><br>(ಜಿಲ್ಲಾವಾರು ವಿವರವನ್ನು ಅನುಬಂಧಲ್ಲಿ ಲಗತ್ತಿಸಿದೆ). |
| ಆ. | ಕಾರ್ಮಿಕರಲ್ಲದಿದ್ದರೂ ಸರ್ಕಾರದ ಸೌಲಭ್ಯಕ್ಕಾಗಿ ಕಾರ್ಮಿಕರೆಂದು ನೋಂದಾಯಿಸಿಕೊಂಡಿರುವವರ ಸಂಖ್ಯೆ ಎಷ್ಟು. | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ಮತ್ತು ಕರ್ನಾಟಕ ನಿಯಮಗಳು, 2006ರಡಿ ನಿಗಧಿಪಡಿಸಿರುವ ಮಾನದಂಡಗಳನ್ನು ಪೂರೈಸಿ ಅವಶ್ಯಕ ದಾಖಲೆಗಳನ್ನು ಸಲ್ಲಿಸಿದ್ದಲ್ಲಿ ಆನ್ ಲೈನ್ ಮೂಲಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳಾಗಿ ನೋಂದಾಯಿಸಲಾಗುತ್ತದೆ. ಅವರು ಸಲ್ಲಿಸಿದ ದಾಖಲೆಗಳು ಹಾಗೂ ಮಾಹಿತಿಗಳ ಬಗ್ಗೆ ಸ್ಪಷ್ಟತೆಯ ಅವಶ್ಯಕತೆ ಇದ್ದಲ್ಲಿ ಅಥವಾ ಸಂಶಯವಿದ್ದಲ್ಲಿ ನೋಂದಣಾಧಿಕಾರಿಗಳಾದ ಹಿರಿಯ ಕಾರ್ಮಿಕ ನಿರೀಕ್ಷಕರು ರ್‍ಯಾಂಡಮ್ ಆಗಿ ಅಗತ್ಯ ಪರಿಶೀಲನೆ ನಡೆಸುತ್ತಾರೆ.<br><br>ಕಾರ್ಮಿಕ ಇಲಾಖೆಯ ಅಧಿಕಾರಿಗಳು ಅನರ್ಹ ಫಲಾನುಭವಿಗಳ ನೋಂದಣಿಯನ್ನು ರದ್ದುಪಡಿಸಲು ಕ್ರಮ ಕೈಗೊಳ್ಳುತ್ತಿದ್ದು, ಈವರೆಗೆ ರಾಜ್ಯದಾದ್ಯಂತ ಒಟ್ಟು 24,816 ಕಾರ್ಮಿಕರ ನೋಂದಣಿಯನ್ನು ರದ್ದುಪಡಿಸಲಾಗಿದೆ. |

| | | |
|---|---|---|
| ಇ. | ಕಾರ್ಮಿಕರಿಗೆ ನೀಡಲಾಗುವ ಸೌಲಭ್ಯಗಳನ್ನು ಒದಗಿಸುವಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರ ಗಮನಿಸಿದೆಯೇ. | ಮಂಡಳಿಯಿಂದ ನೀಡಲಾಗುತ್ತಿರುವ ಯೋಜನೆಗಳ ಬಗ್ಗೆ ನಿರಂತರವಾಗಿ ಅರಿವು ಕಾರ್ಯಕ್ರಮಗಳನ್ನು ಕಾರ್ಮಿಕರಿಗಾಗಿ ಹಮ್ಮಿಕೊಳ್ಳಲಾಗುತ್ತಿದ್ದು, ಮಧ್ಯವರ್ತಿಗಳ ಮೊರೆ ಹೋಗದೆ ನೇರವಾಗಿ ಆನ್ ಲೈನ್ ಮೂಲಕ ತಮ್ಮನ್ನು ನೋಂದಾಯಿಸಿಕೊಂಡು ಸೌಲಭ್ಯ ಪಡೆಯಲು ಕಾರ್ಮಿಕರಿಗೆ ಮಾಹಿತಿಯನ್ನು ನೀಡಲಾಗುತ್ತಿದೆ. ಮಂಡಳಿಯ ನೋಂದಣಿ, ನವೀಕರಣ ಹಾಗೂ ಕ್ಲೇಮ್ ಅರ್ಜಿಗಳ ಸಲ್ಲಿಕೆಯನ್ನು ಸಂಪೂರ್ಣವಾಗಿ ಆನ್ ಲೈನ್‌ನಲ್ಲಿಯೇ ನಿರ್ವಹಿಸಲಾಗುತ್ತಿದೆ. |
| ಈ | ಕಾರ್ಮಿಕರಿಗೆ ನೀಡಲಾಗುವ ಸೌಲಭ್ಯಗಳ ದುರುಪಯೋಗವನ್ನು ತಡೆಗಟ್ಟುವಲ್ಲಿ ಹಾಗೂ ಅರ್ಹ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳನ್ನು ದೊರಕಿಸಿಕೊಡುವಲ್ಲಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಲ್ಲದವರು ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ನೀಡುವ ಕಾರ್ಮಿಕರ ಗುರುತಿನ ಚೀಟಿ ಪಡೆದು ಸೌಲಭ್ಯಗಳನ್ನು ಪಡೆಯುತ್ತಿರುವುದನ್ನು ತಡೆಯುವ ನಿಟ್ಟಿನಲ್ಲಿ ಈಗಾಗಲೇ ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ:-<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) (ಕರ್ನಾಟಕ) ನಿಯಮಗಳು, 2006 ರ ನಿಯಮಕ್ಕೆ ತಿದ್ದುಪಡಿ ತಂದು ನಿಯಮ 20ರ ಉಪ ನಿಯಮ. 7 ಅನ್ನು ಸೇರ್ಪಡಿಸುವ ಮುಖೇನ ಅನರ್ಹರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುವುದು ಕಂಡು ಬಂದಲ್ಲಿ ಅಂತಹ ಕಾರ್ಡ್‌ಗಳನ್ನು ರದ್ದುಪಡಿಸಲು ಸಂಬಂಧಪಟ್ಟ ನೋಂದಣಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಅಲ್ಲದೇ, ಅನರ್ಹ ಕಾರ್ಮಿಕರ ನೋಂದಣಿಯನ್ನು ರದ್ದುಪಡಿಸಲು ರಾಜ್ಯದಾದ್ಯಂತ ಪ್ರತಿ ಜಿಲ್ಲೆಯ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ/ಕಾರ್ಮಿಕ ನಿರೀಕ್ಷಕರನ್ನು ಒಳಗೊಂಡ ತಂಡಗಳನ್ನು ರಚಿಸಿ, ದಿನಾಂಕ:25/01/2023 ರಿಂದ 25/02/2023ರವರೆಗೆ ಬೋಗಸ್ ಕಾರ್ಡು ರದ್ದತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿರುತ್ತದೆ.<br><br>ಈ ಅವಧಿಯಲ್ಲಿ 24,816 ಅನರ್ಹ ಕಾರ್ಡ್ ಗಳನ್ನು ಪತ್ತೆ ಹಚ್ಚಲಾಗಿದ್ದು, ಅವುಗಳನ್ನು ರದ್ದುಪಡಿಸಲಾಗಿದೆ ಹಾಗೂ ಈ ಪ್ರಕ್ರಿಯೆಯನ್ನು ನಿರಂತರವಾಗಿ ಮುಂದುವರೆಸಲಾಗುತ್ತಿದೆ. |

| | | |
|---|---|---|
| | | ಮುಂದುವರೆದು, ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸದಲ್ಲಿ ತೊಡಗಿರುವ ಅರ್ಹ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಣಿ ಮಾಡಲು ಹಾಗೂ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಈ ಕೆಳಕಂಡಂತೆ ಕ್ರಮ ವಹಿಸಲಾಗುತ್ತಿದೆ.<br>1. ನೋಂದಣಿ ಮತ್ತು ನವೀಕರಣಕ್ಕಾಗಿ ಪಾವತಿಸಬೇಕಾಗಿದ್ದ ಶುಲ್ಕವನ್ನು ಕೈಬಿಡಲಾಗಿದೆ.<br>2. ಸ್ವತಃ ಅರ್ಜಿದಾರರೇ ಆನ್ ಲೈನ್ ಮೂಲಕ ನೋಂದಣಿಗಾಗಿ ಅರ್ಜಿ ಸಲ್ಲಿಸಲು ಹಾಗೂ ಸೌಲಭ್ಯಗಳ ವಿಲೇವಾರಿಗಾಗಿ ಅರ್ಜಿ ಸಲ್ಲಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ.<br>3. ಕಾರ್ಮಿಕರು ಮಂಡಳಿಯ ನೋಂದಣಿ ಮತ್ತು ಸೌಲಭ್ಯಗಳ ಕುರಿತು ಮಾಹಿತಿಯನ್ನು ಪಡೆಯುವ ನಿಟ್ಟಿನಲ್ಲಿ 24/7 ಟೋಲ್ ಫ್ರೀ ನಂ.155214ನ ವ್ಯವಸ್ಥೆ ಕಲ್ಪಿಸಲಾಗಿದೆ.<br>4. ಫಲಾನುಭವಿಗಳನ್ನು ಸುಲಭವಾಗಿ ನೋಂದಾಯಿಸಲು ಅನುಕೂಲವಾಗುವಂತೆ ತಾಲ್ಲೂಕು ಮಟ್ಟದಲ್ಲಿ ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರುಗಳನ್ನು ನೋಂದಣಾಧಿಕಾರಿಯಾಗಿ ನೇಮಕ ಮಾಡಲಾಗಿದೆ.<br>5. ಮಂಡಳಿಯ ನೋಂದಣಿ ಹಾಗೂ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲು ಮಾಹಿತಿ ಶಿಕ್ಷಣ ಸಂವಹನ (IEC) ಕಾರ್ಯಕ್ರಮಗಳನ್ನು ರಾಜ್ಯದದ್ಯಾಂತ ಹಮ್ಮಿಕೊಳ್ಳಲಾಗಿರುತ್ತದೆ: |

**ಕಾಇ 286 ಎಲ್‌ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ

| ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಣಿಯಾದ ಫಲಾನುಭವಿಗಳ ಜಿಲ್ಲಾವಾರು | | |
|---|---|---|
| ಕ್ರಸಂ | ಜಿಲ್ಲೆ | ಒಟ್ಟು ಸಂಖ್ಯೆ |
| 1 | ಬೆಂಗಳೂರು ನಗರ | 4,37,238 |
| 2 | ಕಲಬುರ್ಗಿ | 317,247 |
| 3 | ಹಾವೇರಿ | 286410 |
| 4 | ಬೆಳಗಾವಿ | 254567 |
| 5 | ಬಿದರ್ | 251423 |
| 6 | ಕೊಪ್ಪಳ | 214174 |
| 7 | ದಾವಣಗೆರೆ | 182793 |
| 8 | ಧಾರವಾಡ | 180587 |
| 9 | ಮೈಸೂರು | 170280 |
| 10 | ಉತ್ತರಕನ್ನಡ | 166593 |
| 11 | ಬಾಗಲಕೋಟೆ | 156376 |
| 12 | ಬಿಜಾಪುರ | 149997 |
| 13 | ಚಿತ್ರದುರ್ಗ | 145795 |
| 14 | ಶಿವಮೊಗ್ಗ | 143822 |
| 15 | ಯಾದಗಿರಿ | 140400 |
| 16 | ತುಮಕೂರು | 128480 |
| 17 | ಬಳ್ಳಾರಿ | 124490 |
| 18 | ಕೋಲಾರ | 121619 |
| 19 | ಗದಗ | 112031 |
| 20 | ಚಿಕ್ಕಮಗಳೂರು | 109999 |
| 21 | ದಕ್ಷಿಣಕನ್ನಡ | 104865 |
| 22 | ಹಾಸನ | 100740 |
| 23 | ರಾಯಚೂರು | 91441 |
| 24 | ಉಡುಪಿ | 70241 |
| 25 | ರಾಮನಗರ | 64802 |
| 26 | ಚಾಮರಾಜನಗರ | 61336 |
| 27 | ಚಿಕ್ಕಬಳ್ಳಾಪುರ | 58807 |
| 28 | ಮಂಡ್ಯ | 45376 |
| 29 | ಬೆಂಗಳೂರು ಗ್ರಾಮಾಂತರ | 26730 |
| 30 | ಮಡಿಕೇರಿ | 9345 |
| ಒಟ್ಟು | | 4428004 |